# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 236 |
| ಸದಸ್ಯರ ಹೆಸರು | ಶ್ರೀ ಎಸ್.ನಾಗರಾಜ್ |
| ಉತ್ತರಿಸುವ ದಿನಾಂಕ: | 12-12-2018 |
| ಉತ್ತರಿಸುವವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಮಲೆ ಮಹದೇಶ್ವರ ಬೆಟ್ಟದಲ್ಲಿ ಯಾತ್ರಾರ್ಥಿಗಳ ಮತ್ತು ಭಕ್ತಾದಿಗಳ ಅನುಕೂಲಕ್ಕಾಗಿ ಯಾವ ಯಾವ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ: (ವಿವರ ಒದಗಿಸುವುದು) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ: | ಮಲೆ ಮಹದೇಶ್ವರ ಬೆಟ್ಟದಲ್ಲಿ ಭಕ್ತಾಧಿಗಳ ಅನುಕೂಲಕ್ಕಾಗಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದು, ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ.<br><br>ಕಾಮಗಾರಿಗಳ ಅಂದಾಜುವೆಚ್ಚ ಮತ್ತು ಪ್ರಗತಿಯ ವಿವರ ಅನುಬಂಧದಲ್ಲಿ ಒದಗಿಸಿದೆ. |
| ಆ) | ಚಾಮರಾಜನಗರ ತಾಲ್ಲೂಕು ಚನ್ನಪ್ಪನಪುರ ಗ್ರಾಮದ ದೇವಾಲಯದ ಬಳಿ ಯಾತ್ರಾರ್ಥಿಗಳ ಭಕ್ತಾದಿಗಳ ತಂಗುವಿಕೆಗೆ ಕೊಠಡಿಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗವುದೇ: | ಚಾಮರಾಜನಗರ ತಾಲ್ಲೂಕು ಚನ್ನಪ್ಪನಪುರ ಗ್ರಾಮದ ಶ್ರೀ ವೀರಭದ್ರಸ್ವಾಮಿ ದೇವಾಲಯದ ಬಳಿ ಯಾತ್ರಾರ್ಥಿಗಳು, ಭಕ್ತಾಧಿಗಳ ತಂಗುವಿಕೆಗೆ ಪ್ರವಾಸೋದ್ಯಮ ಇಲಾಖೆ ವತಿಯಿಂದ ಪ್ರವಾಸಿಗರ ಅನುಕೂಲಕ್ಕಾಗಿ ರೂ.100.00 ಲಕ್ಷಗಳ ಅಂದಾಜಿನಲ್ಲಿ ಡಾರ್ಮೆಟರಿ ಹಾಗೂ ಕೂಡು ರಸ್ತೆ ಇನ್ನಿತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್. ಚಾಮರಾಜನಗರರವರಿಗೆ ವಹಿಸಲಾಗಿದೆ. ಸದರಿ ಕಾಮಗಾರಿಯ ಮೊದಲನೇ ಕಂತಿನ ಅನುದಾನ ರೂ.4.00 ಲಕ್ಷಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ. |
| ಇ) | ಬಿಳಿಗಿರಿರಂಗನ ಬೆಟ್ಟದ ರಂಗನಾಥಸ್ವಾಮಿ ದೇವಾಲಯದ ಪುನರ್ ನಿರ್ಮಾಣ ಕಾಮಗಾರಿಗಳು ಯಾವ ಹಂತದಲ್ಲಿವೆ: ದೇವಾಲಯವನ್ನು ಸಾರ್ವಜನಿಕರ ದರ್ಶನಕ್ಕೆ ಮುಕ್ತಗೊಳಿಸಲಾಗಿದೆಯೇ? | ಚಾಮರಾಜನಗರ ಜಿಲ್ಲೆ, ಯಳಂದೂರು ತಾಲ್ಲೂಕು, ಬಿಳಿಗಿರಿರಂಗನಬೆಟ್ಟದ ಶ್ರೀ ಬಿಳಿಗಿರಿರಂಗನಾಥಸ್ವಾಮಿ ದೇವಾಲಯದ ಸಂರಕ್ಷಣಾ ಕಾಮಗಾರಿಯು ಶೇ.90% ರಷ್ಟು ಪೂರ್ಣಗೊಂಡಿದ್ದು, ಬಾಕಿ ಕೆಲಸಗಳು ಪೂರ್ಣಗೊಂಡ ನಂತರ ದೇವಾಲಯಕ್ಕೆ ಮಹಾ ಸಂಪ್ರೋಕ್ಷಣೆಯಾದ ಮೇಲೆ ದೇವರ ದರ್ಶನಕ್ಕೆ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು. |

(ಸಂಖ್ಯೆ: ಕಂಇ 135 ಮುಸಪ್ರ 2018)

**ರಾಜಶೇಖರ.ಬಿ.ಪಾಟೀಲ**
(ಗಣಿ ಮತ್ತು ಭೂವಿಜ್ಞಾನ ಹಾಗೂ
ಮುಜರಾಯಿ ಸಚಿವರು)

# ಅನುಬಂಧ

1

## ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಕೈಗೊಂಡಿರುವ ಕಾಮಗಾರಿಯ ವಿವರ

(ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 236 ಅನುಬಂಧ –1)

| ಕ್ರ.ಸಂ | ಕಾಮಗಾರಿಯ ವಿವರ | ಅಂದಾಜು ಮೊತ್ತ (ಲಕ್ಷಗಳಲ್ಲಿ) | ಕಾಮಗಾರಿಯ ಪ್ರಗತಿಯ ಹಂತ |
|---|---|---|---|
| 1 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ ಒಳ ಚರಂಡಿ ವ್ಯವಸ್ಥೆ ಯೋಜನೆ ನಿರ್ಮಿಸುವ ಕಾಮಗಾರಿ. | 2710.00 | ಡ್ರೈನೇಜ್ ಪೈಪ್ ಲೈನ್ ಹಾಕುವ ಮ್ಯಾನ್ ಹೋಲ್‌ಗಳನ್ನು ನಿರ್ಮಿಸುವ ಕಾಮಗಾರಿ ಮುಗಿದಿದ್ದು ಎಸ್.ಟಿ.ಪಿ ನಿರ್ಮಾಣಕ್ಕೆ 2 ಎಕರೆ ಜಮೀನು ಖರೀಧಿಸಲು ಕ್ರಮ ವಹಿಸಲಾಗುತ್ತಿದೆ. ಕಾಮಗಾರಿಯು ಪ್ರಗತಿಯಲ್ಲಿದೆ. |
| 2 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಆವರಣದಲ್ಲಿ 512 ಕೊಠಡಿಗಳ ವಸತಿಗೃಹ ನಿರ್ಮಾಣದ ಒಂದನೇ ಹಂತದ 92 ಕೊಠಡಿಗಳ ನಿರ್ಮಾಣ ಕಾಮಗಾರಿ. | 2390.00 | ಈ ಕಾಮಗಾರಿಯ ಯೋಜನೆಯಲ್ಲಿ 512 ಕೊಠಡಿಗಳನ್ನು ನಿರ್ಮಿಸಲು ಉದ್ದೇಶಿಸಿದ್ದು ಮೊದಲ ಹಂತವಾಗಿ ಸೆಲ್ಲಾರ್‌ನಲ್ಲಿ ಕಾರ್ ಪಾರ್ಕಿಂಗ್ ಮತ್ತು ನೆಲ ಮಹಡಿಯಲ್ಲಿ 92 ಕೊಠಡಿಗಳನ್ನು ನಿರ್ಮಿಸುವ ಕಾಮಗಾರಿಯನ್ನು ರೂ 2390.00 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದ್ದು ಸೆಲ್ಲಾರ್‌ನ ಎಲ್ಲಾ ಕಾಲಂಗಳ ಕಾಮಗಾರಿ ಮುಗಿದಿದ್ದು ಸೆಲ್ಲಾರ್ ಸ್ಲ್ಯಾಬ್ ಹಾಕುವ ಕಾಮಗಾರಿ ನಿದಾನ ಗತಿಯಲ್ಲಿ ಸಾಗಿದ್ದು ಗುತ್ತಿಗೆದಾರರಿಗೆ ಎಚ್ಚರಿಕೆ ನೋಟೀಸ್ ನೀಡಲಾಗಿದೆ. |
| 3 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ದೀಪದ ಗಿರಿ ಒಡ್ಡಿನಲ್ಲಿ ಶ್ರೀ ಮಹದೇಶ್ವರರ ಬೃಹತ್ ಪ್ರತಿಮೆ ನಿರ್ಮಾಣ ಕಾಮಗಾರಿ | 2000.00 | ಈ ಕಾಮಗಾರಿಗೆ ಟೆಂಡರ್ ಪ್ರಕ್ರಿಯೇ ಪೂರ್ಣಗೊಂಡಿದ್ದು ನಿವೇಶನವನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| 4 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ 90 ಕೊಠಡಿಗಳ ವಸತಿ ಗೃಹ ನಿರ್ಮಾಣ ಕಾಮಗಾರಿ | 968.00 | ಈ ಕಾಮಗಾರಿಯು ಪೂರ್ಣಗೊಂಡಿದ್ದು ದಿನಾಂಕ30-11-2018 ರಂದು ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಯವರಿಂದ ಉದ್ಘಾಟನೆ ನೆರವೇರಿಸಲಾಗಿದೆ. |
| 5 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಆವರಣದಲ್ಲಿರುವ ರಂಗಮಂದಿರದ ಮುಂಭಾಗದಲ್ಲಿರುವ ವಿಶಾಲವಾದ ಆವರಣಕ್ಕೆ ಜಿ.ಐ ಶೀಟ್ ಮೇಲ್ಛಾವಣಿ ಅಳವಡಿಸುವ ಕಾಮಗಾರಿ ಹಾಗೂ ಬಿಸಿಲು ಮತ್ತು ಮಳೆಯಿಂದ ರಕ್ಷಣೆ ಸೌಲಭ್ಯ ಕಲ್ಪಿಸುವ ಕಾಮಗಾರಿ. | 555.00 | ಈ ಕಾಮಗಾರಿಯು ಪೂರ್ಣಗೊಂಡಿದ್ದು ದಿನಾಂಕ: 10-01-2018 ರಲ್ಲಿ ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಯವರಿಂದ ಶೆಲ್ಟರ್‌ನ ಉದ್ಘಾಟನೆ ನೆರವೇರಿಸಲಾಗಿದೆ. |
| 6 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ ಗ್ರಾಮೀಣ ಪ್ರದೇಶಗಳಿಂದ ಗುಂಪು ಗುಂಪಾಗಿ ಬರುವ ಭಕ್ತಾಧಿಗಳಿಗೆ ವಸತಿ ಸೌಕರ್ಯ ಡಾರ್ಮಿಟರಿ ಕಟ್ಟಡ ನಿರ್ಮಿಸುವ ಕಾಮಗಾರಿ. | 486.00 | ಈ ಕಟ್ಟಡದ ಎಲ್ಲಾ ಕೊಠಡಿಗಳ ಕಾಮಗಾರಿ ಪೂರ್ಣಗೊಂಡಿದ್ದು ನೆಲ ಹಾಸು ಹಾಕುವ ಕಾಮಗಾರಿ ಪ್ರಗತಿಯಲ್ಲಿದೆ. |
| 7 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಆವರಣದಲ್ಲಿರುವ ಅಂತರಗಂಗೆ ಅಭಿವೃದ್ಧಿ ಪಡಿಸುವ ಕಾಮಗಾರಿ. | 427.00 | ಕಲ್ಯಾಣಿಯ 3 ಕಡೆಯ ಹಂತಗಳ ನಿರ್ಮಾಣವು ಪೂರ್ಣಗೊಂಡಿದ್ದು ಉಳಿದ 1 ಭಾಗದ ಹಂತಗಳು ನಿರ್ಮಾಣದ ಕಾಮಗಾರಿ. ಹಾಗೂ ರೀ ವೆಲ್ಡರಿಂಗ್ ಪೈಪ್ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿದೆ. |

Scanned by CamScanner

| | | | |
|---|---|---|---|
| 8 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಬಸ್ ನಿಲ್ದಾಣದ ಹತ್ತಿರ ಸುಸಜ್ಜಿತ ಹೋಟೆಲ್ ನಿರ್ಮಾಣ ಕಾಮಗಾರಿ. | 215.00 | ಈ ಕಟ್ಟಡದ ಕಾಲಂ ಫೌಂಡೇಷನ್ ಮತ್ತು ಕಾಲಂಗಳನ್ನು ನಿರ್ಮಿಸುವ ಕಾಮಗಾರಿ ಪ್ರಗತಿಯಲ್ಲಿದೆ. |
| 9 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ ಹೆಚ್ಚುವರಿ ಸಿ.ಸಿ. ಕ್ಯಾಮರಗಳನ್ನು ಅಳವಡಿಸುವ ಕಾಮಗಾರಿ. | 63.00 | ಈ ಕಾಮಗಾರಿಗೆ ಇ-ಪ್ರಕ್ಯೂರ್‌ಮೆಂಟ್ ಟೆಂಡರ್ ಮೂಲಕ ಕರೆಯಲಾಗಿದ್ದು ಟೆಂಡರ್‌ನ ತಾಂತ್ರಿಕ ಬಿಡ್ ತೆರೆದಿದ್ದು ಟೆಂಡರ್ ಪ್ರಕ್ರಿಯೇ ಪ್ರಗತಿಯಲ್ಲಿದೆ. |
| 10 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ ಸಿ.ಸಿ. ಕ್ಯಾಮರಗಳನ್ನು ಕಂಟ್ರೋಲ್ ಮಾಡಲು ವೀಡಿಯೋ ವಾಲ್ ನಿರ್ಮಿಸುವ ಕಾಮಗಾರಿ. | 49.00 | ಈ ಕಾಮಗಾರಿಗೆ ಇ-ಪ್ರಕ್ಯೂರ್‌ಮೆಂಟ್ ಟೆಂಡರ್ ಮೂಲಕ ಕರೆಯಲಾಗಿದ್ದು ಟೆಂಡರ್‌ನ ತಾಂತ್ರಿಕ ಬಿಡ್ ತೆರೆದಿದ್ದು ಟೆಂಡರ್ ಪ್ರಕ್ರಿಯೇ ಪ್ರಗತಿಯಲ್ಲಿದೆ. |
| 11 | ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಅವರಣದಲ್ಲಿ 2 ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸುವ ಕಾಮಗಾರಿ. | 10.00 | ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿದ್ದು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡುವುದು ಪ್ರಗತಿಯಲ್ಲಿದೆ. |

ಜಿಲ್ಲಾಧಿಕಾರಿಗಳ ಪರವಾಗಿ,
ಚಾಮರಾಜನಗರ ಜಿಲ್ಲೆ, ಚಾಮರಾಜನಗರ

Scanned by CamScanner